# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೊಟ್ಟಿಗೆರೆ ವಾರ್ಡ್ ಸಂಖ್ಯೆ: 194

## ವಾರ್ಡ್ ಕಛೇರಿಯಲ್ಲಿ ದಿನಾಂಕ: 07-05-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು

1. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ವಾರ್ಡ್ ನಂ.194, ಬೆಂಗಳೂರು.
2. ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ.
3. ಆರೋಗ್ಯಾಧಿಕಾರಿಗಳು, ಗೊಟ್ಟಿಗೆರೆ.
4. ಕಂದಾಯ ಪರಿವೀಕ್ಷಕರು, ವಾರ್ಡ್ ನಂ.194, ಗೊಟ್ಟಿಗೆರೆ.
5. ತೋಟಗಾರಿಕೆ ಸಹಾಯಕರು, ಗೊಟ್ಟಿಗೆರೆ.
6. ಸಹಾಯಕ ಉಪ ನಿರೀಕ್ಷಕರು ಸಂಚಾರ ಗೊಟ್ಟಿಗೆರೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು(ಬಿಡಬ್ಲ್ಯೂಎಸ್ಎಸ್‌ಬಿ).
8. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.194, ಗೊಟ್ಟಿಗೆರೆ.
9. ಸಹಾಯಕ ಅಭಿಯಂತರರು(ಬೆಸ್ಕಾಂ).
10. ಮಾರ್ಷಲ್, ವಾರ್ಡ್ ನಂ.194, ಗೊಟ್ಟಿಗೆರೆ.
11. ಅಧ್ಯಕ್ಷರು, ರಾಯಲ್ ಕೌಂಟಿ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ
12. ಅಧ್ಯಕ್ಷರು, ಕ್ಲಾಸಿಕ್ ಆರ್ಚರ್ಡ್ಸ್.
13. ಅಧ್ಯಕ್ಷರು, ಪರಿವರ್ತನ ಸಂಘ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.
14. ಅಧ್ಯಕ್ಷರು, 7ನೇ ಬ್ಲಾಕ್, 9ನೇ ಫೇಸ್, ಜೆ.ಪಿ.ನಗರ.

ದಿನಾಂಕ: 07.05.2022 ರಂದು ಬೆಳಿಗ್ಗೆ 11.30 ಗಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಬಗ್ಗೆ.

   ಕೋವಿಡ್-19 ಸೋಂಕು ಪ್ರಕರಣಗಳು ಹೆಚ್ಚಾಗುತ್ತಿರುವುದರಿಂದ ಮುನ್ನೆಚರಿಕೆ ಕ್ರಮ ವಹಿಸಲು ಆರೋಗ್ಯ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಕೋವಿಡ್ ಸೂಕ್ತ ನಡವಳಿಕೆಯನ್ನು ಪಾಲಿಸಲು ತಿಳಿಸಲಾಯಿತು.

2. ಘನತ್ಯಾಜ್ಯ ನಿರ್ವಹಣೆ ಬಗ್ಗೆ :-

   i) ಹಿಂದಿನ ಸಭೆಯಲ್ಲಿ ತಿಳಿಸಿದಂತೆ H.M World City, ರಾಯಲ್‌ಕೌಂಟಿ ಬಡಾವಣೆ, ಕ್ಲಾಸಿಕ್ ಆರ್ಚರ್ಡ್ಸ್, ಐಡಿಬಿಐ ಬಡಾವಣೆಯ ರಸ್ತೆಗಳಲ್ಲಿ ಶೇಖರಣೆಗೊಂಡಿದ್ದ ತ್ಯಾಜ್ಯವನ್ನು ತೆರವುಗೊಳಿಸುವುದಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು.

   ii) ಸಭೆಯಲ್ಲಿ ಹಾಜರಿದ್ದ ಆರ್‌ಡಬ್ಲ್ಯೂಎ ಅಧ್ಯಕ್ಷರುಗಳು ಎಸ್‌ಡಬ್ಲ್ಯೂಎಂ ತಂಡವು ತಮ್ಮೊಂದಿಗೆ ಸ್ಪೆಷಲ್ ಡ್ರೈವ್‌ಗಳನ್ನು ಕೈಗೊಳ್ಳುವಲ್ಲಿ ಸಕರಾತ್ಮಕವಾಗಿ ಸ್ಪಂದಿಸುತ್ತಿರುವ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದರು.

Scanned by CamScanner

iii) ಕ್ಲಾಸಿಕ್ ಆರ್ಚರ್ಡ್ಸ್ ಮತ್ತು ಹಿಮಗಿರಿ ಮೆಡೋಸ್ ಬಡಾವಣೆಗಳಿಗೆ ಹೋಗುವ ರಸ್ತೆಯಲ್ಲಿ ಶೇಖರಗೊಂಡಿರುವ ತ್ಯಾಜ್ಯವನ್ನು ಪೂರ್ಣವಾಗಿ ತೆರವುಗೊಳಿಸಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

iv) ವಾರ್ಡ್‌ನ ವಿವಿಧ ರಸ್ತೆಗಳ ಬದಿ ಪಾದಚಾರಿ ಹಾಗೂ ಚರಂಡಿಗಳಲ್ಲಿ ಸಂಗ್ರಹವಾಗಿರುವ ಘನತ್ಯಾಜ್ಯವನ್ನು ನಿಯತ ಕಾಲಿಕವಾಗಿ ತೆರವುಗೊಳಿಸಲು ಸಭೆಯಲ್ಲಿ ಸೂಚಿಸಲಾಯಿತು.

v) ಸಭೆಯಲ್ಲಿ ಹಾಜರಿದ್ದ ಟ್ರಾಫಿಕ್ ಪೋಲೀಸ್‌ರವರು ಘನತ್ಯಾಜ್ಯ ವಾಹನಗಳನ್ನು ಪರಿಶೀಲಿಸಿದ್ದು ವಾಹನಗಳಿಗೆ ಸಂಬಂಧಪಟ್ಟ ದಾಖಲೆಗಳಾದ ನೊಂದಾವಣೆ/ಫಿಟ್‌ನೆಸ್/ವಿಮೆಯ ಪ್ರಮಾಣ ಪತ್ರ, ವಾಹನ ಪರವಾನಗಿ, ಇತ್ಯಾದಿ ನವೀಕರಿಸಲು ಹಾಗೂ ಪೂರ್ಣವಾಗಿ ನಿಯಮಾನುಸಾರ ಹೊಂದಲು ಸೂಚಿಸಿದರು. ಈ ಸಂಬಂಧ ಸಹಾಯಕ ಕಾರ್ಯಪಾಲಕ ಅಭಿಯಂತರರು(ಘನತ್ಯಾಜ್ಯ ನಿರ್ವಹಣಾ ಕೋಶ) ರವರು ಅಗತ್ಯ ಕ್ರಮ ವಹಿಸುವುದು.

3. ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಿಸಿದ ವಿಷಯಗಳ ಬಗ್ಗೆ.

i) ಸಹಾಯಕ ಕಾರ್ಯಪಾಲಕ ಅಭಿಯಂತರರು(ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ಜಿಎಸ್‌ಎಲ್‌ಆರ್ ಕಾರ್ಯವು ಪೂರ್ಣಗೊಂಡಿದ್ದು ಬೂಸ್ಟರ್ ಪಂಪ್ ಕಾಮಗಾರಿಯನ್ನು ಪ್ರಾರಂಭಿಸಲು ಅಗತ್ಯ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

ii) ಸುಬ್ಬರಾಯನ ಕೆರೆಯಲ್ಲಿ ಒಳಚರಂಡಿ ಕಾಮಗಾರಿಯು ಪ್ರಗತಿಯಲ್ಲಿದ್ದು ಈ ಮಾಹೆಯಲ್ಲಿ ಕೆಲಸ ಪೂರ್ಣಗೊಳಿಸುವುದಾಗಿ ಸಭೆಗೆ ತಿಳಿಸಿದರು.

iii) ಜಿ.ಆರ್. ರಿಜೆಂಟ್ ಅಪಾರ್ಟ್‌ಮೆಂಟ್‌ರ ಬಳಿ ಒಳಚರಂಡಿ ನೀರು ಹುಕ್ಕಿ ಹರಿಯುತ್ತಿದ್ದು ಈ ಸಂಬಂಧ ದುರಸ್ಥಿ ಕಾರ್ಯವನ್ನು ಕೂಡಲೇ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ತಿಳಿಸಲಾಯಿತು.

iv) ಸೌತ್ ಅವಿನ್ಯೂ ಬಡಾವಣೆಯಲ್ಲಿ 7 ಮತ್ತು 8ನೇ ಕ್ರಾಸ್ ಮಧ್ಯ ಒಳಚರಂಡಿ ಲಿಂಕ್ ಅನ್ನು ಸ್ಥಾಪಿಸಲು ಹಲವು ಸಭೆಗಳಲ್ಲಿ ಸೂಚಿಸಲಾಗಿರುತ್ತದೆ. ಈ ಸಂಬಂಧ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ವಾರ್ಡ್ ಅಭಿಯಂತರರೊಂದಿಗೆ ಸದರಿ ಬಡಾವಣೆಯ ನಕ್ಷೆಯೊಂದಿಗೆ ಸ್ಥಳ ಪರಿಶೀಲನೆ ಮಾಡಲು ಕೂಡಲೇ ಕ್ರಮ ವಹಿಸಲು ಸೂಚಿಸಲಾಯಿತು.

4. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.

i) ರಾಯಲ್ ಕೌಂಟಿ ಬಡಾವಣೆಯಲ್ಲಿ ಪದೇ ಪದೇ ವಿದ್ಯುತ್ ಕಡಿತವಾಗುತ್ತಿದ್ದು ಇದನ್ನು ಸರಿಪಡಿಸಲು ಕೋರಲಾಯಿತು. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು

ii) ಗೊಟ್ಟಿಗೆರೆ ಕೆರೆ ಸುತ್ತಲು ಹಾಗೂ ವಾರ್ಡ್‌ನ ಕೆಲ ರಸ್ತೆಗಳಲ್ಲಿ ಹೊಸ ಬೀದಿ ದೀಪಗಳು ಅವಶ್ಯವಿರುವ ವಿಷಯದ ಬಗ್ಗೆ ವಾರ್ಡ್ ಅಭಿಯಂತರರು ಪರಿಶೀಲಿಸಿ ಅಗತ್ಯ ಕ್ರಮ ವಹಿಸುವುದು.

Scanned by CamScanner

...ಚಾರ ನಿಯಮಗಳನ್ನು ಪಾಲಿಸುವ ಬಗ್ಗೆ.

i) ಸಹಾಯಕ ಉಪ ನಿರೀಕ್ಷಕರು (ಸಂಚಾರ) ರವರು ಮಾತನಾಡುತ್ತಾ ನಾಗರೀಕರಲ್ಲಿ ಸಂಚಾರ ನಿಯಮಗಳ ಅರಿವು ಮೂಡಿಸಲು ವಾರ್ಡ್‌ನ ಮುಖ್ಯ ಹಾಗೂ ಅಡ್ಡರಸ್ತೆಗಳಲ್ಲಿನ ವಾರ್ಡನ ಬೋರ್ಡ್‌ಗಳ ಮೇಲೆ ಜಾಗೃತಿ ಘೋಷಣೆಗಳನ್ನು ಅಳವಡಿಸಲು ಕರಡು ನಕ್ಷೆಯನ್ನು ಹಂಚಿಕೊಂಡಿರುತ್ತಾರೆ. ವಾರ್ಡ್ ಅಭಿಯಂತರರು ಈ ಸಂಬಂಧ ಅಗತ್ಯ ಕ್ರಮ ವಹಿಸುವುದು.

ii) ಕೆಲವು ರಸ್ತೆಗಳಲ್ಲಿರುವ ಹಂಪುಗಳ ಮೇಲೆ ಬಣ್ಣ ಬಳೆಯುವ ಅವಶ್ಯಕತೆ ಇರುವ ಬಗ್ಗೆ ಸಾರ್ವಜನಿಕರು ಸಲಹೆ ನೀಡಿದ್ದು ಸಹಾಯಕ ಉಪ ನಿರೀಕ್ಷಕರು ಸಂಚಾರ ರವರು ಈ ಸಂಬಂಧ ಅಗತ್ಯ ಕ್ರಮ ವಹಿಸುವುದು.

6. ಕ್ಲಾಸಿಕ್ ಆರ್ಚರ್ಡ್ಸ್ ಬಡಾವಣೆಯ ಹಿಂದಿನ ಸಾಲಿನಲ್ಲಿ ನಿರ್ಮಿಸಲಾಗಿದ್ದ ಡಾಂಬರು ರಸ್ತೆಗಳಲ್ಲಿ ಮುಳುಗಡೆ (sinking) ಆಗುತ್ತಿರುವ ಬಗ್ಗೆ ಬಡಾವಣೆಯ ಅಧ್ಯಕ್ಷರು ಸಭೆಗೆ ತಿಳಿಸಿದರು. ಸದರಿ ರಸ್ತೆಗಳನ್ನು ದುರಸ್ಥಿ ಪಡಿಸಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಲು ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು

ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: 194, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
16. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
17. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.

Scanned by CamScanner

. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
19. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
20. ಪೋಲೀಸ್ ಇನ್ಸ್‌ಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
21. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
22. ಸ್ಥಳೀಯ ನಾಗರಿಕಕಲ್ಯಾಣ ಸಂಸ್ಥೆಗಳು.

Scanned by CamScanner